*ನಗರದಲ್ಲಿ ವಾಯುಮಾಲಿನ್ಯ ನಿಯಂತ್ರಣ*

# ಭುರೆ ಲಾಲ್ ಸಮಿತಿ ವರದಿ ಜಾರಿಗೆ ಚಿಂತನೆ

ಬೆಂಗಳೂರು: ನಗರದಲ್ಲಿ ವಾಯು ಮಾಲಿನ್ಯ ಪ್ರಮಾಣ ತಗ್ಗಿಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಭುರೆ ಲಾಲ್ ಸಮಿತಿ ವರದಿಯನ್ನು ಜಾರಿಗೆ ತರಲು ಚಿಂತನೆ ನಡೆಸಿದೆ.

ಪರಿಸರ ಮಾಲಿನ್ಯ ತಡೆ ಮತ್ತು ನಿಯಂತ್ರಣ ಪ್ರಾಧಿಕಾರದ (ಇಪಿಸಿಎ) ಅಧ್ಯಕ್ಷರಾಗಿದ್ದ ಭುರೆ ಲಾಲ್ ಅವರ ನೇತೃತ್ವದಲ್ಲಿ ಸಮಿತಿಯನ್ನು ಸುಪ್ರೀಂ ಕೋರ್ಟ್ ರಚಿಸಿತ್ತು. ನವದೆಹಲಿಯ ಮಾಲಿನ್ಯದ ಬಗೆಗೆ ಹಾಗೂ ಅದನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಿತಿಯು 1999–2000ದಲ್ಲಿ ವರದಿ ಸಲ್ಲಿಸಿತ್ತು. ಎಲ್ಲ ನಗರಗಳಲ್ಲಿಯೂ ವರದಿ ಜಾರಿಗೆ ತರುವಂತೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿತ್ತು. ಆದರೆ, ಬೆಂಗಳೂರು ಸೇರಿದಂತೆ ಹಲವು ನಗರಗಳಲ್ಲಿ ವರದಿ ಇನ್ನೂ ಸಮರ್ಪಕವಾಗಿ ಜಾರಿಯಾಗಿಲ್ಲ.

ವಾತಾವರಣದಲ್ಲಿನ ಸಲ್ಫರ್ ಮತ್ತು ನೈಟ್ರೋಸ್ ಆಕ್ಸೈಡ್ ಪ್ರಮಾಣವನ್ನು ಕಡಿಮೆ ಮಾಡಬೇಕು. ಸಾರ್ವಜನಿಕ ಸಾರಿಗೆಗಳಲ್ಲಿ ಸಿಎನ್‌ಜಿ ಇಂಧನ ಹೆಚ್ಚು ಬಳಸಬೇಕು. ಹಳೆಯ ವಾಹನಗಳ ಬಳಕೆ ನಿಷೇಧಿಸಬೇಕು. ಸಾರ್ವಜನಿಕ ಸಾರಿಗೆಯನ್ನು ಜನರು ಹೆಚ್ಚು ಬಳಸುವಂತೆ ಪ್ರೇರೇಪಿಸಬೇಕು. ನಗರದಲ್ಲಿ ಭಾರಿ ವಾಹನಗಳನ್ನು ನಿಷೇಧಿಸಬೇಕು. ವಾಹನಗಳ ನಿಲುಗಡೆಗೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ವರದಿ ಶಿಫಾರಸು ಮಾಡಿದೆ.

ಈ ಕುರಿತು ಪ್ರತಿಕ್ರಿಯಿಸಿರುವ ಮಂಡಳಿ ಅಧ್ಯಕ್ಷ ಡಾ.ವಾಮನ ಆಚಾರ್ಯ, 'ನಗರದಲ್ಲಿ ದಿನದಿಂದ ದಿನಕ್ಕೆ ವಾಹನಗಳಿಂದ ಹೆಚ್ಚು ಮಾಲಿನ್ಯ ವಾಗುತ್ತಿದೆ. ಹೀಗಾಗಿ, ಮಾಲಿನ್ಯವನ್ನು ನಿಯಂತ್ರಿಸಲು ಭುರೆ ಲಾಲ್ ಸಮಿತಿಯು ನೀಡಿರುವ ವರದಿಯನ್ನು ಜಾರಿಗೆ ತರಲು ಚಿಂತನೆ ನಡೆಸಲಾಗಿದೆ' ಎಂದರು.

'ನಗರದಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಸಮರ್ಪಕವಾಗಿಲ್ಲ. ಎರ್ರಾಬಿರ್ರಿಯಾಗಿ ಖಾಸಗಿ ವಾಹನಗಳು ಓಡಾಡುತ್ತವೆ. ಇವುಗಳಿಗೆ ನಿಯಂತ್ರಣ ಹಾಕಬೇಕಿದೆ' ಎಂದರು.

'ಹೊರ ವರ್ತುಲ ರಸ್ತೆಗಳಲ್ಲಿ ವಾಹನಗಳು ಸ್ಥಿರ ವೇಗದಲ್ಲಿ ಚಲಿಸುವುದರಿಂದ ಅಲ್ಲಿ ವಾಯು ಮಾಲಿನ್ಯ ಪ್ರಮಾಣ ಕಡಿಮೆಯಿದೆ. ನಗರದಲ್ಲಿಯೂ ಈ ವ್ಯವಸ್ಥೆಯನ್ನು ಜಾರಿಗೆ ತರುವ ಅಗತ್ಯವಿದೆ' ಎಂದು ಹೇಳಿದರು.

ವಿಜ್ಞಾನಿ ಟಿ.ವಿ. ರಾಮಚಂದ್ರ ಮಾತನಾಡಿ, 'ಭುರೆ ಲಾಲ್ ವರದಿಯನ್ನು ಜಾರಿಗೆ ತರಲು ಚಿಂತನೆ ನಡೆಸಿರುವುದು ಒಳ್ಳೆಯದೆ. ಆದರೆ, ಇದನ್ನು ಸರ್ಕಾರ ಸಂಪೂರ್ಣವಾಗಿ ಬೆಂಬಲಿಸಬೇಕು. ಎಲ್ಲ ಇಲಾಖೆಗಳು ಸಮನ್ವಯದಲ್ಲಿ ಕೆಲಸ ಮಾಡಿದಾಗ ಮಾತ್ರ ಮಾಲಿನ್ಯ ಪ್ರಮಾಣ ಕಡಿಮೆಯಾಗಲು ಸಾಧ್ಯ. ಇದರ ಜೊತೆಗೆ ಕಲ್ಲಿದ್ದಲು ಬಳಕೆ ಹಾಗೂ ಕೈಗಾರಿಕೆ ನೀತಿಯ ಕುರಿತು ಕಟ್ಟುನಿಟ್ಟಾದ ನಿಯಮಗಳನ್ನು ಜಾರಿಗೆ ತರಬೇಕು' ಎಂದರು.

